**<u>ಸಾಕ್ಷಿಗೆ ದಿನಾಂಕ 19.11.2025 ರಂದು ಪ್ರಮಾಣ ವಚನ ನೀಡಲಾಯಿತು.</u>**

ಈ ದಾವೆಯಲ್ಲಿ ನಾನು **3**ನೇ ವಾದಿಯಾಗಿದ್ದು, ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಪ್ರಮಾಣ ಪತ್ರದಲ್ಲಿ ಹೇಳಲಾದ ಎಲ್ಲಾ ವಿಷಯಗಳನ್ನು ವಕೀಲರ ಮೂಲಕ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ವಿಷಯಗಳು ಸತ್ಯವಾಗಿರುತ್ತವೆ. ಪ್ರಮಾಣ ಪತ್ರದಲ್ಲಿ ಇರುವ ಸಹಿ ನನ್ನ ಸಹಿ ಆಗಿರುತ್ತದೆ.

**<u>ಮುಖ್ಯವಿಚಾರಣೆಃವಾದಿ ಪರ ವಕೀಲರಿಂದಃ</u>**

ನಮೂನೆ-3 ನ್ನು ಹಾಜರುಪಡಿಸಿದ್ದು ನಿಪಿ-1 ಎಂದು, ತೆರಿಗೆ ಬೇಡಿಕೆ ರಿಜಿಸ್ಟರ ನ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ನಿಪಿ-2 ರಿಂದ 4 ಎಂದು, ವಿದ್ಯುತ್ ಬಿಲ್ ಗಳನ್ನು ಹಾಜರುಪಡಿಸಿದ್ದು ನಿಪಿ-5 ಮತ್ತು 6 ಎಂದು, ಸರ್ವೆ ನಂಬರ 109 ಕ್ಕೆ ಸಂಬಂಧಿಸಿದ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ನಿಪಿ-7 ಎಂದು, ಮ್ಯುಟೇಶನ್ ರಿಜಿಸ್ಟರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ನಿಪಿ-8 ಎಂದು, ಇಂಡೆಕ್ಸ್ ಆಫ್ ಲ್ಯಾಂಡ್ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ನಿಪಿ-9 ರಿಂದ 12 ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಕಾಲವಕಾಶ ಕೇಳಿದ್ದು ಕಾಲವಕಾಶ ನೀಡಲಾಯಿತು.

**ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

**ಸಾ.ಓ.ಹೇ.ಸ.ಒ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ**
**ಹುಣಸೂರು.**